# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103, ☎ : 0816-2255650, 2273511ಫ್ಯಾಕ್ಸ್ : 0816-2270719


ಸಂಖ್ಯೆ:ತು.ವಿ.: ಪ.ವಿ.:ವಿ.ವಿ.-07/2021-22/64 ದಿನಾಂಕ: 27.04.2021

## ಸುತ್ತೋಲೆ

**ವಿಷಯ: 2020 ರ ನವಂಬರ್/ಡಿಸೆಂಬರ್ ಮಾಹೆಗಳಲ್ಲಿ ನಡೆದ ವಿವಿಧ ಸ್ನಾತಕ ಪದವಿಗಳ I,II,III,IV,V,VI ಸೆಮಿಸ್ಟರ್ ಪರೀಕ್ಷೆಗಳ ಫಲಿತಾಂಶ ಪ್ರಕಟಣೆ ಮತ್ತು ಉತ್ತರ ಪತ್ರಿಕೆಗಳ ಛಾಯಾ ಪ್ರತಿ / ಮರುಮೌಲ್ಯಮಾಪನ / ಛಾಲೆಂಜ್ ಮೌಲ್ಯಮಾಪನದ ಮಾಹಿತಿ ಕುರಿತು.**

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ **ವಿವಿಧ ಸ್ನಾತಕ ಪದವಿಗಳಲ್ಲಿ ವ್ಯಾಸಂಗ ಮಾಡಿ ಡಬಲ್ ದಿ ಡ್ಯೂರೇಷನ್ ಆಫ್ ದಿ ಕೋರ್ಸ್ ಪೂರೈಸಿ ಅನುತ್ತೀರ್ಣರಾಗಿದ್ದ ವಿದ್ಯಾರ್ಥಿಗಳಿಗೆ ವಿಶೇಷವಾಗಿ** 2020 ರ ನವಂಬರ್/ಡಿಸೆಂಬರ್ ಮಾಹೆಗಳಲ್ಲಿ ನಡೆಸಲಾದ I,II,III,IV,V,VI ಸೆಮಿಸ್ಟರ್ ಪರೀಕ್ಷೆಗಳ ಫಲಿತಾಂಶವನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಫಲಿತಾಂಶ ಪಟ್ಟಿ (Result Sheet) ಗಳನ್ನು ತಮ್ಮ ಕಾಲೇಜಿನ ಇ-ಮೇಲ್ ವಿಳಾಸಕ್ಕೆ ಕಳುಹಿಸಲಾಗುವುದು. ಸದರಿ ಮಾಹಿತಿಯನ್ನು ವಿದ್ಯಾರ್ಥಿಗಳ ಗಮನಕ್ಕೆ ತರುವುದು.

ತಡೆಹಿಡಿಯಲಾಗಿರುವ ಅಥವಾ ಫಲಿತಾಂಶ ಪ್ರಕಟವಾಗದಿರುವ ಕುರಿತು ವಿದ್ಯಾರ್ಥಿಗಳು ಸೂಕ್ತ ಮಾಹಿತಿಗಳನ್ನು ಪ್ರಾಂಶುಪಾಲರ ಮೂಲಕ ಈ ಕಚೇರಿಗೆ ಒದಗಿಸಿ, **ಒಂದು ವಾರದೊಳಗಾಗಿ ಫಲಿತಾಂಶವನ್ನು ಪಡೆದುಕೊಳ್ಳತಕ್ಕದ್ದು.**

| | | |
|---|---|---|
| 1. | ವಿದ್ಯಾರ್ಥಿಗಳು ಛಾಯಾ ಪ್ರತಿಗಾಗಿ ಕಾಲೇಜಿನಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ | 20.05.2021 |
| 2. | ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ (ಛಾಯಾ ಪ್ರತಿ) | 24.05.2021 |
| 3. | ವಿಶ್ವವಿದ್ಯಾನಿಲಯಕ್ಕೆ ವಿವರಗಳನ್ನು ಸಲ್ಲಿಸಲು ಕೊನೆಯ ದಿನಾಂಕ (ಛಾಯಾ ಪ್ರತಿ) | 26.05.2021 |
| 4. | ಪರೀಕ್ಷಾ ವಿಭಾಗದಿಂದ ಕಾಲೇಜಿನವರು ಜೆರಾಕ್ಸ್ (ಛಾಯಾ ಪ್ರತಿ) ಪ್ರತಿಯನ್ನು ಪಡೆಯುವ ದಿನಾಂಕ | 31.05.2021<br>(ಬೆಳಗ್ಗೆ 11:00 ಗಂಟೆಯ ನಂತರ) |
| 5. | ವಿದ್ಯಾರ್ಥಿಗಳು ಮರುಮೌಲ್ಯಮಾಪನ/ ಛಾಲೆಂಜ್ ಮೌಲ್ಯಮಾಪನಕ್ಕೆ ಕಾಲೇಜಿನಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ | 05.06.2021 |
| 6. | ಮರುಮೌಲ್ಯಮಾಪನ/ಛಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕಡೆಯ ದಿನಾಂಕ | 07.06.2021 |
| 7. | ಮರುಮೌಲ್ಯಮಾಪನ/ಛಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕಡೆಯ ದಿನಾಂಕ | 09.06.2021 |

**ಶೇಕಡಾ 15ಕ್ಕಿಂತ ಕಡಿಮೆ ಅಂಕಗಳನ್ನು ಪಡೆದ ವಿದ್ಯಾರ್ಥಿಗಳು ಚಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿಸಲ್ಲಿಸತಕ್ಕದ್ದು. ಆದಾಗ್ಯೂ ಶೇಕಡಾ 15 ಕ್ಕಿಂತ ಕಡಿಮೆ ಅಂಕಗಳನ್ನು ಪಡೆದ ವಿದ್ಯಾರ್ಥಿಗಳು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸುವುದಿಲ್ಲ. ಪ್ರಾಂಶುಪಾಲರು ಅರ್ಜಿಗಳನ್ನು ಪರಿಶೀಲಿಸಿ, ಆನ್‌ಲೈನ್‌ನಲ್ಲಿ ನಮೂದಿಸುವುದು.**

ಛಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವವರು ಕಡ್ಡಾಯವಾಗಿ ನಿಗದಿತ ಶುಲ್ಕ ಪಾವತಿಸಿ, ಉತ್ತರ ಪತ್ರಿಕೆಯ ಛಾಯಾಪ್ರತಿಯನ್ನು ಪಡೆದು ಸಂಬಂಧಿಸಿದ ಅಧ್ಯಾಪಕರಿಂದ ಮೌಲ್ಯಮಾಪನ ಮಾಡಿಸಿ ನೀಡಿರುವ ಅಂಕಗಳಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಅಂತಹ ವಿದ್ಯಾರ್ಥಿಗಳು ನಿಗದಿತ ಮರುಮೌಲ್ಯಮಾಪನ ಶುಲ್ಕದೊಂದಿಗೆ ಕಡ್ಡಾಯವಾಗಿ ಒಂದು ವಿಷಯಕ್ಕೆ **ರೂ.500-00 (ರೂಪಾಯಿ ಐದು ನೂರು ಮಾತ್ರ)** ಗಳ ಹೆಚ್ಚುವರಿ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸುವುದು.

(....2)

ನಿಗದಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಯಾವುದೇ ಕಾರಣದಿಂದಲೂ ಪರಿಗಣಿಸಲಾಗುವುದಿಲ್ಲ.

ಛಾಯಾಪ್ರತಿ, ಮರುಮೌಲ್ಯಮಾಪನ ಮತ್ತು ಛಾಲೆಂಜ್ ಮೌಲ್ಯಮಾಪನ ಶುಲ್ಕವನ್ನು ತಮ್ಮ ಕಾಲೇಜಿನಲ್ಲಿಯೇ ಪಾವತಿಸಿಕೊಂಡು, RTGS / NEFT **ಮೂಲಕ ವಿಶ್ವವಿದ್ಯಾನಿಲಯದ ಎಸ್.ಬಿ.ಐ. ಖಾತೆ** ಸಂ. 36954908103 ಗೆ **ನಿಗದಿಪಡಿಸಿದ ದಿನಾಂಕದೊಳಗೆ ಪಾವತಿಸಿ**, ಸೂಕ್ತ ವಿವರಗಳೊಂದಿಗೆ **ಕುಲಸಚಿವ (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರಿಗೆ ಸಲ್ಲಿಸುವುದು. ಛಾಯಾಪ್ರತಿ, ಮರುಮೌಲ್ಯಮಾಪನ ಮತ್ತು ಛಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ವಿವರಗಳನ್ನು ದ್ವಿ ಪ್ರತಿಯಲ್ಲಿ ಸಲ್ಲಿಸಲು ಕೋರಲಾಗಿದೆ.

**ಶುಲ್ಕಗಳ ವಿವರ:**

| | | | | |
|---|---|---|---|---|
| 1. | Xerox copy for one subject with Application Fee | : | Rs. | 210-00 |
| 2. | Revaluation for one subject with Application Fee | : | Rs. | 260-00 |
| 3. | Challenge Valuation Fee (Rs.210+260+500) | : | Rs. | 970-00 |

**ವಿ.ಸೂ: ಪರಿಶಿಷ್ಟ ಜಾತಿ /ಪಂಗಡ/ ಪ್ರವರ್ಗ- I ರ ವಿದ್ಯಾರ್ಥಿಗಳಿಗೆ ಮೇಲೆ ತಿಳಿಸಿರುವ ಶುಲ್ಕದಲ್ಲಿ ಶೇ.50 ರಷ್ಟು ರಿಯಾಯಿತಿ ಇರುತ್ತದೆ.**

ಆದೇಶದ ಮೇರೆಗೆ

ಕುಲಸಚಿವರು (ಪರೀಕ್ಷಾಂಗ)

ಗೆ,

ಪ್ರಾಂಶುಪಾಲರು, ಎಲ್ಲಾ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ಇಂದೇ ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು
2. ವಿಭಾಗದ ಮೇಲ್ವಿಚಾರಕರು, ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.- ಇಂದೇ ಪ್ರಾಂಶುಪಾಲರುಗಳ ಇ-ಮೇಲ್ ವಿಳಾಸಕ್ಕೆ ಕಳುಹಿಸುವುದು.
3. ಕಛೇರಿ ಪ್ರತಿ